# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ-190,
# ಮಂಗಮ್ಮನಪಾಳ್ಯ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

ಮಾನ್ಯ ನೋಡಲ್ ಅಧಿಕಾರಿ/ಸ.ಕಾ.ನಿ.ಅ. (ಹೆಚ್.ಎಸ್.ಆರ್ ಉಪವಿಭಾಗ) ರವರು ದಿನಾಂಕ: 07.12.2020 ರಂದು ಬೆಳಿಗ್ಗೆ 11.30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು 190-ಮಂಗಮ್ಮನಪಾಳ್ಯ, ವಾರ್ಡ್ ಕಛೇರಿ (ಹೆಚ್.ಎಸ್.ಆರ್ ಉಪವಿಭಾಗ) ರಲ್ಲಿ ನಡೆಸಿದ್ದ, ವಾರ್ಡ್ ಸಮಿತಿ ಸಭೆಯ ನಡುವಳಿಗಳು.

**ಸಭೆಯಲ್ಲಿ ಹಾಜರಿದ್ದ ಸದಸ್ಯರು/ಅಧಿಕಾರಿಗಳು**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ |
|---|---|---|
| 1 | ಶ್ರೀ ಟಿ. ಹನುಮಂತರಾಯ | ಅಧ್ಯಕ್ಷರು/ ನೋಡಲ್ ಅಧಿಕಾರಿಗಳು |
| 2 | ಶ್ರೀ ರವಿ ಡಿ | ಸಂಚಾಲಕರು/ ಕಾರ್ಯದರ್ಶಿಗಳು |
| 3 | ಶ್ರೀ ಕುಮಾರ್ | ಪಿ.ಎಸ್.ಐ ಬಂಡೇಪಾಳ್ಯ ಪೋಲಿಸ್ ಠಾಣೆ |
| 4 | ಶ್ರೀ ಸಾಯಬಣ್ಣ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 5 | ಶ್ರೀ ಡಿ. ವಿಜಯಕುಮಾರ್ | ಕಿರಿಯ ಅಭಿಯಂತರರು, ಬೇಸ್ಕಂ |
| 6 | ಶ್ರೀ ರಮೇಶ್ ಡಿ | ಕಿ.ಅ. ವಿದ್ಯುತ್ ವಿಭಾಗ |
| 7 | ಶ್ರೀ ರಾಜು ಟಿ.ಜಿ. | ಹಿರಿಯ ಆರೋಗ್ಯ ಪರಿವೀಕ್ಷಕರು |
| 8 | ಶ್ರೀಮತಿ ಡಾ|| ಮಹಾದೇವಿ | ಪ್ರಾಥಮಿಕ ಆರೋಗ್ಯ ಕೇಂದ್ರ |
| 9 | ಶ್ರೀ ನಾಗೇಂದ್ರ | ಸದಸ್ಯರು |
| 10 | ಶ್ರೀ ಶ್ರೀನಿವಾಸ ರೆಡ್ಡಿ | ಸದಸ್ಯರು |
| 11 | ಶ್ರೀ ಸುರೇಶ್ ರೆಡ್ಡಿ | ಸದಸ್ಯರು |
| 12 | ಶ್ರೀ ಉಮೇಶ್. | ಸದಸ್ಯರು |
| 13 | ಶ್ರೀ ಗೋಪಿನಾಥ | ಸದಸ್ಯರು |
| 14 | ಶ್ರೀ ಶಂಕರ ಎನ್ | ಸದಸ್ಯರು |
| 15 | ಶ್ರೀ ಚಂದ್ರ ರೆಡ್ಡಿ | ಸದಸ್ಯರು |
| 16 | ಶ್ರೀ ಬಾಬು ರೆಡ್ಡಿ | ಸದಸ್ಯರು |

ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ ಟಿ ಹನುಮಂತರಾಯ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು, ಅಧ್ಯಕ್ಷರು ವಾರ್ಡ್ ಸಭೆಗೆ ಹಾಜರಾಗಿದ್ದ ಸದಸ್ಯರಿಗೆ ಮತ್ತು ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಪ್ರಸ್ತಾಪಿಸಲು ಕೋರಿದರು.

ಹಿಂದಿನ ಸಭಾ ನಡುವಾಳಿಯ ಪ್ರತಿ ಅಂಶದ ಬಗ್ಗೆ ಚರ್ಚಿಸಿ ಇಂಜಿಯರಿಂಗ್, ಘನತ್ಯಾಜ್ಯ ನಿರ್ವಹಣೆ ಮತ್ತು ಕೋವಿಡ್-19 ತಂಡಗಳು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಿ ಸುಧಾರಣೆ ತಂದಿರುವುದನ್ನು ಗಮನಿಸಿದ್ದು, ಇನ್ನು ಉತ್ತಮ ರೀತಿಯಲ್ಲಿ ಮುಂದುವರೆಸಲು ನೋಡಲ್ ಅಧಿಕಾರಿ ರವರು ತಿಳಿಸಿದರು.

Scanned with Car

| ಕ್ರ ಸಂ | ಇಲಾಖೆ | ವಿಷಯ |
|---|---|---|
| 1 | **ಬಿ.ಬಿ.ಎಂ.ಪಿ (ವಿದ್ಯುತ್)** | ಹಿಂದಿನ ಸಭೆಯಲ್ಲಿ ತಿಳಿಸಿರುವ ವಿಷಯಗಳ ಬಗ್ಗೆ ಪ್ರಸ್ತಾಪಿಸಲಾಗಿದ್ದು, ಇಂದಿನ ಸಭೆಯಲ್ಲಿ ಸ.ಅ. ವಿದ್ಯುತ್ ರವರು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿರುತ್ತಾರೆ. ಹಾಗೂ ಐ.ಟಿ.ಐ ಬಡಾವಣೆ ಉದ್ಯಾನವನದ ರಸ್ತೆಯಲ್ಲಿ ಬೀದಿದೀಪ ನಿರ್ವಹಣೆ, ವೆಂಕಟೇಶ್ವರ ದೇವಸ್ಥಾನ ರಸ್ತೆ ಮತ್ತು ವಿಷ್ಣುವರ್ಧನ್ ರಸ್ತೆಯಲ್ಲಿ ಬೀದಿ ದೀಪಗಳನ್ನು ನಿರ್ವಹಿಸಲು ಸದಸ್ಯರು ಕೋರಿದ್ದು, ಈ ಬಗ್ಗೆ ಸ.ಅ. ವಿದ್ಯುತ್ ರವರಿಗೆ ಕ್ರಮ ವಹಿಸುವಂತೆ ಅಧ್ಯಕ್ಷರು ತಿಳಿಸಿರುತ್ತಾರೆ.<br>**ಕ್ರಮ : ಸ.ಅ. ವಿದ್ಯುತ್** |
| 2 | **ಆರೋಗ್ಯ ಇಲಾಖೆ** | ಹಿಂದಿನ ಸಭೆಯಲ್ಲಿ ತಿಳಿಸಿರುವ ವಿಷಯಗಳ ಬಗ್ಗೆ ಪ್ರಸ್ತಾಪಿಸಲಾಗಿದ್ದು, ಈ ಬಗ್ಗೆ ಮಾಂಸದ ಅಂಗಡಿಗಳಿಗೆ ನೋಟಿಸ್ ಜಾರಿಮಾಡಲಾಗಿದೆ. ಐ.ಟಿ.ಐ ಬಡಾವಣೆ ಉದ್ಯಾನವನ ವನ್ನು ಸ್ವಚ್ಛಗೊಳಿಸಲಾಗಿದೆ ಮತ್ತು ವಾರ್ಡ್ ವ್ಯಾಪ್ತಿಯಲ್ಲಿ ಔಷದಿ ಸಂಪಡಿಸಲಾಗಿದ್ದು, ಮುಂದಿನ ಸಭೆಯಲ್ಲಿ ಗುತ್ತಿಗೆದಾರರಿಗೆ ಹಾಜರಾಗಲು ಸೂಚಿಸಲಾಗುವುದೆಂದು ಹಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿರುತ್ತಾರೆ. ವಾರ್ಡ್ ವ್ಯಾಪ್ತಿಯಲ್ಲಿ ಸೊಳ್ಳೆ ಔಷದಿ ಸಿಂಪಡಿಸಲು ಸದಸ್ಯರು ಕೋರಿರುತ್ತಾರೆ. ಕ್ರಮ ವಹಿಸುವಂತೆ ಅಧ್ಯಕ್ಷರು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿರುತ್ತಾರೆ.<br>**ಕ್ರಮ : ಕಿರಿಯ ಆರೋಗ್ಯ ಪರಿವೀಕ್ಷಕರು.** |
| 3 | **ಬಿ.ಡಬ್ಲ್ಯೂ.ಎಸ್.ಎಸ್.ಬಿ** | ಐ.ಟಿ.ಐ ಬಡಾವಣೆ ಮತ್ತು ಮದೀನಾ ನಗರಗಳಲ್ಲಿ ಕಾಮಗಾರಿ ಪೂರ್ಣಗೊಂಡಿದ್ದು, ವೆಟ್‌ಮಿಕ್ಸ್ ಹಾಕಲು ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ 2-3 ದಿನಗಳಲ್ಲಿ ಪೂರ್ಣಗೊಳಿಸಲಾಗುವುದೆಂದು ಸ.ಅ. ಬಿಡಬ್ಲ್ಯೂಎಸ್.ಎಸ್.ಬಿ ರವರು ತಿಳಿಸಿರುತ್ತಾರೆ.<br>ಮುನೇಶ್ವರ ಬಡಾವಣೆ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಂಪರ್ಕವನ್ನು ಒದಗಿಸಲು ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಕ್ರಮ ವಹಿಸಲಾಗುವುದೆಂದು ಸ.ಅ. ರವರು ತಿಳಿಸಿರುತ್ತಾರೆ. ಈ ಬಗ್ಗೆ ಕ್ರಮ ಕೈಗೊಳ್ಳಲು ಅಧ್ಯಕ್ಷರು ತಿಳಿಸಿರುತ್ತಾರೆ.<br>**ಕ್ರಮ : ಸ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ** |
| 4 | **ಬೆಸ್ಕಾಂ ಇಲಾಖೆ** | ನಂಜುಡಪ್ಪ ಬಡಾವಣೆಯ 4ನೇ ಮುಖ್ಯ ರಸ್ತೆಯಲ್ಲಿ ಇರುವ ವಿದ್ಯುತ್ ಕಂಬಗಳನ್ನು ರಸ್ತೆ ಅಡ್ಡಲಾಗಿರುವುದರಿಂದ ಸಾರ್ವಜನಿಕ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ಇದರಿಂದ ರಸ್ತೆಗೆ ಅಡ್ಡಲಾಗಿರುವ ಕಂಬಗಳನ್ನು ಸ್ಥಳಾಂತರ ಮಾಡಲು ಹಾಗೂ ಹೊಸಪಾಳ್ಯ ಸ್ಮಶಾನ ರಸ್ತೆಯಲ್ಲಿ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಅನ್ನು ಬದಲಾಯಿಸಲು ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಕ್ರಮ ವಹಿಸಲು ಅಧ್ಯಕ್ಷರು ಸೂಚಿಸಿರುತ್ತಾರೆ.<br>**ಕ್ರಮ : ಸಹಾಯಕ ಅಭಿಯಂತರರು, ಬೆಸ್ಕಾಂ.** |
| 5 | **ತೋಟಗಾರಿಕೆ ಇಲಾಖೆ.** | ಹಿಂದಿನ ಸಭೆಯಲ್ಲಿ ತಿಳಿಸಿರುವ ವಿಷಯಗಳ ಬಗ್ಗೆ ಪ್ರಸ್ತಾಪಿಸಲಾಗಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಸಂಬಂಧಪಟ್ಟ ಅಧಿಕಾರಿ ರವರು ತಿಳಿಸಿರುತ್ತಾರೆ. |
| 6 | **ಪೋಲೀಸ್**<br>(ಬಂಡೇಪಾಳ್ಯ ಪೋಲೀಸ್ ಠಾಣೆ) | ಐ.ಟಿ.ಐ ಬಡಾವಣೆ ಉದ್ಯಾನವನದಲ್ಲಿ ಯುವಕರು ಆಟವಾಡುತ್ತಿದ್ದು, ಇದರಿಂದ ಸಾರ್ವಜನಿಕರಿಗೆ/ಹಿರಿಯ ನಾಗರೀಕರಿಗೆ ತೊಂದರೆಯಾಗುತ್ತಿದ್ದು, ಪೋಲೀಸ್ ಸಿಬ್ಬಂದಿ ನಿಯೋಜಿಸಿ ಯುವಕರಿಗೆ ಎಚ್ಚರಿಕೆ ನೀಡಲು ಸದಸ್ಯರು |

Scanned with Car

| | | |
|---|---|---|
| | | ಕೋರಿರುತ್ತಾರೆ. ಈ ಬಗ್ಗೆ ಕ್ರಮ ವಹಿಸಲಾಗುವುದೆಂದು ಪೋಲಿಸ್ ಇನ್ಸ್‌ಪೆಕ್ಟರ್ ರವರು ತಿಳಿಸಿರುತ್ತಾರೆ.<br>**ಕ್ರಮ: ಪೋಲಿಸ್ ಉಪ ನಿರೀಕ್ಷಕರು** |
| 7 | **ಕಾಮಗಾರಿ** | ಹಿಂದಿನ ಸಭೆಯಲ್ಲಿ ತಿಳಿಸಿರುವ ವಿಷಯಗಳ ಬಗ್ಗೆ ಪ್ರಸ್ತಾಪಿಸಲಾಗಿದ್ದು, ಈ ಬಗ್ಗೆ ಕ್ರಮ ವಹಿಸಲಾಗುತ್ತಿದೆ ಎಂದು ಸ.ಅ. ರವರು ತಿಳಿಸಿರುತ್ತಾರೆ.<br>ಕ್ರಮ : ಸ.ಅ. ವಾರ್ಡ್ ನಂ. 190. |

ಈ ಮೇಲಿನ ಎಲ್ಲಾ ವಿಷಯಗಳಿಗೆ ಸಂಬಂಧಪಟ್ಟಂತೆ ಕೂಲಂಕುಷವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿದ್ದ ಎಲ್ಲಾ ಅಧಿಕಾರಿಗಳಿಗೆ ಸೂಚಿಸಿ, ಸಭೆಯನ್ನು ವಂದಾನಾರ್ಪಣೆಯೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ವಾರ್ಡ್ ನಂ. 190

ಅಧ್ಯಕ್ಷರು/ ನೋಡಲ್ ಅಧಿಕಾರಿಗಳು
ವಾರ್ಡ್ ನಂ. 190

ಪ್ರತಿಯನ್ನು:-

1. ವಿಶೇಷ ಆಯುಕ್ತರು, (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿ ಆಯುಕ್ತರು(ಬೊಮ್ಮನಹಳ್ಳಿ ವಲಯ) ರವರ ಅವಗಾಹನೆಗಾಗಿ ಸಲ್ಲಿಸಿದೆ
3. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಸಲ್ಲಿಸಿದೆ.
4. ವಾರ್ಡ್ ಸಮಿತಿಯ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.
5. ಕಛೇರಿ ಪ್ರತಿ.

Scanned with Car